ದಿಃ 18-07-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ವಾಯ್ ಎನ್ ಎಸ್ ವಕೀಲರಿಂದ.

ಈ ದಾವೆಯಲ್ಲಿ ನಾನು ವಾದಿಯ ಜಿ ಪಿ ಎ ಹೋಲ್ಡರ್ ಆಗಿದ್ದು, ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಲಯಕ್ಕೆ ನನ್ನ ತಂದೆ ನನಗೆ ದಿನಾಂಕ 02-07-20204 ರಂದು ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಆಸ್ತಿ ಸಂಖ್ಯೆ 155 ರ 2011-2012 ನೇ ಸಾಲಿನ ಮನೆ/ಭೂಮಿ ಆಕರಣೆ ಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ದಿನಾಂಕ 11-12-2018 ರಂದು ನನ್ನ ತಂದೆ ತೇರಗಾಂವ ಗ್ರಾಮ ಪಂಚಾಯತಿಗೆ ನೀಡಿದ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ದಿನಾಂಕ 22-06-2022 ರಂದು ನಾನು ಎ ಡಿ ಎಲ್ ಆರ್ ಹಳಿಯಾಳ ರವರಿಗೆ ನೀಡಿದ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು, ದಿನಾಂಕ 30-07-2022 ರಂದು ನನ್ನ ತಂದೆ ತೇರಗಾಂವ ಗ್ರಾಮ ಪಂಚಾಯತಿಗೆ ನೀಡಿದ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು, ದಿನಾಂಕ 06-02-1990 ರ ನೋಂದಾಯಿತ ಖರೀದಿ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು, ಎರಡು ಭಾವಚಿತ್ರಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 7 ರಿಂದ 9 ಎಂದು ಗುರುತಿಸಲಾಯಿತು. ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.